# ಎನ್ಐಟಿಕೆಯಲ್ಲಿ ಗಣರಾಜ್ಯೋತ್ಸವ ಸಂಭ್ರಮ



ಸುರತ್ಕಲ್‌ನ ಎನ್ಐಟಿಕೆಯಲ್ಲಿ 74ನೇ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು.

**ಮಂಗಳೂರು:** ಇಲ್ಲಿನ ಸುರತ್ಕಲ್ ಎನ್ ಐಟಿಕೆ (ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕರ್ನಾಟಕ) ಯಲ್ಲಿ ಗಣರಾಜ್ಯೋತ್ಸವ ಆಚರಿಸಲಾಯಿತು. ಸಂಸ್ಥೆಯ ಪ್ರಭಾರ ನಿರ್ದೇಶಕ ಪ್ರೊ.ಜಿ.ಸಿ. ಮೋಹನ್‌ಕುಮಾರ್ ಮಾತನಾಡಿದರು. ಅತ್ಯುತ್ತಮ ಎನ್‌ಸಿಸಿ ಕೆಡೆಟ್‌ಗಳಿಗೆ, ಭದ್ರತಾ ಸಿಬ್ಬಂದಿಗೆ, ಎನ್ಐಟಿಕೆ ಆಂಗ್ಲ ಹಾಗೂ ಕನ್ನಡ ಮಾಧ್ಯಮ ಶಾಲಾ ಮಕ್ಕಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು. ಎನ್ಐಟಿಕೆ ರಿಜಿಸ್ಟ್ರಾರ್, ಡೀನ್‌ಗಳು, ಎಚ್ಒಡಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಭಾಗವಹಿಸಿದ್ದರು.

Hosa Diganta, Date: 28/01/2023 p, 08